# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **409** |
| ಸದಸ್ಯರ ಹೆಸರು | : | ಡಾ: ಎಂ.ಜಿ. ಮುಳೆ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 10-03-2025 |
| ಉತ್ತರಿಸುವ ಸಚಿವರು | : | ಮಾನ್ಯ ಇಂಧನ ಸಚಿವರು |

***

| ಪ್ರಶ್ನೆ | | ಉತ್ತರ |
|---|---|---|
| ಅ) | ಸರ್ಕಾರವು ಎಲ್ಲರಿಗೂ 200 ಯುನಿಟ್ ಉಚಿತ ವಿದ್ಯುತ್ ನೀಡುವುದಾಗಿ ಚುನಾವಣಾ ಪೂರ್ವದಲ್ಲಿ ಘೋಷಿಸಿದ್ದು ನಿಜವೆ; | ಗೃಹ ಬಳಕೆ ಸ್ಥಾವರಗಳಿಗೆ ಪ್ರತಿ ತಿಂಗಳಿಗೆ 200 ಯೂನಿಟ್‌ಗಳವರೆಗಿನ ವಿದ್ಯುಚ್ಛಕ್ತಿಯನ್ನು ಉಚಿತವಾಗಿ ಒದಗಿಸಲು ಸರ್ಕಾರವು ಉದ್ದೇಶಿಸಿ, "ಗೃಹ ಜ್ಯೋತಿ" ಯೋಜನೆಯನ್ನು ದಿನಾಂಕ: 01.07.2023 ರಿಂದ ಜಾರಿಗೆ ಬರುವಂತೆ ಅನುಷ್ಠಾನಗೊಳಿಸಲಾಗಿರುತ್ತದೆ.<br><br>ಸರ್ಕಾರದ ಆದೇಶ ಸಂಖ್ಯೆ: ಎನರ್ಜಿ/164/ ಪಿ.ಎಸ್.ಆರ್/2023 ದಿನಾಂಕ 05.06.2023 ರನ್ವಯ "ಗೃಹ ಜ್ಯೋತಿ" ಯೋಜನೆಯಡಿ ಪ್ರತಿ ಮನೆಗೆ ಪ್ರತಿ ತಿಂಗಳಿಗೆ ಗರಿಷ್ಠ 200 ಯೂನಿಟ್‌ಗಳವರೆಗಿನ ಬಳಕೆಯ ಮಿತಿಯಲ್ಲಿ ಮಾಸಿಕ ಸರಾಸರಿ ಬಳಕೆಯ (ಆರ್ಥಿಕ ವರ್ಷ 2022-23ರ ಬಳಕೆಯ ಆಧಾರದನ್ವಯ) ಯೂನಿಟ್‌ಗಳ ಮೇಲೆ ಶೇ.10ರಷ್ಟು ಹೆಚ್ಚಿನ ಬಳಕೆಯ ಮಿತಿಯನ್ನು ಅನುಮತಿಸಿ ಮಾಹೆಯಾನ ನಿಗಧಿಪಡಿಸಿರುವ ಅರ್ಹತಾ ಯೂನಿಟ್‌ಗಳವರೆಗಿನ ವಿದ್ಯುತ್ ಬಿಲ್ಲಿನ ಮೊತ್ತವನ್ನು ಸರ್ಕಾರದಿಂದ ಉಚಿತವಾಗಿ ಒದಗಿಸಲಾಗುತ್ತದೆ.<br><br>ಮಾಹೆಯಾನ ಅರ್ಹತಾ ಯೂನಿಟ್‌ಗಳನ್ನು ಮೀರಿ 200 ಯೂನಿಟ್‌ಗಳವರೆಗಿನ ವಿದ್ಯುತ್ ಬಳಕೆಯ ಮೊತ್ತವನ್ನು ಹಾಗೂ 200 ಯೂನಿಟ್‌ಗಳ ಬಳಕೆಯನ್ನು ಮೀರಿದ ವಿದ್ಯುತ್ ಬಿಲ್ಲಿನ ಮೊತ್ತವನ್ನು ಗ್ರಾಹಕರು ಸಂಪೂರ್ಣವಾಗಿ ಪಾವತಿಸಬೇಕಾಗಿರುತ್ತದೆ |
| ಆ) | 200 ಯುನಿಟ್‌ಗಿಂತ ಹೆಚ್ಚು ಬಳಕೆ ಮಾಡುವ ಗ್ರಾಹಕರಿಗೆ 200 ಯುನಿಟ್ ಉಚಿತ ವಿದ್ಯುತ್ ನೀಡದೆ ಪೂರ್ತಿ ಹಣ ಪಡೆಯುತ್ತಿರುವುದು ನಿಜವೆ; | |
| ಇ) | 200 ಯುನಿಟ್‌ಗಿಂತ ಹೆಚ್ಚು ಬಳಕೆ ಮಾಡಿದರೆ ಈಗಾಗಲೇ ಘೋಷಿಸಿದ್ದಂತೆ 200 ಯುನಿಟ್ ಉಚಿತ ವಿದ್ಯುತ್ ನೀಡಿ ಅದಕ್ಕಿಂತ ಹೆಚ್ಚು ಬಳಕೆ ಮಾಡಿದ ಯೂನಿಟ್‌ಗಳಿಗೆ ಮಾತ್ರ ಶುಲ್ಕ ವಸೂಲು ಮಾಡಬೇಕಾಗಿತ್ತಲ್ಲವೆ; | |
| ಈ) | ಆ ರೀತಿ ಮಾಡದೆ ಪೂರ್ತಿ ಶುಲ್ಕ ವಸೂಲಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? | |

ಸಂಖ್ಯೆ: ಎನರ್ಜಿ 45 ಇಬಿಎಸ್ 2025

(ಕೆ.ಜೆ.ಜಾರ್ಜ್) 7/3/25
ಇಂಧನ ಸಚಿವರು